# ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.

ಸಿ.ಸಿ. ನಂಃ 640/2016 ಸಿಡಬ್ಲೂ: 2 ಪಿಡಬ್ಲೂ: 3

ಪ್ರಮಾಣವಚನ ಬೋಧಿಸಲಾಯಿತು ದಿಃ 06-11-2025

ಹೆಸರು : ಕಲ್ಲಪ್ಪ

ತಂದೆ ಹೆಸರು : ಮಲ್ಲೇಶಪ್ಪ

ವಯಸ್ಸು : 65 ವರ್ಷ

ಉದ್ಯೋಗ : ಕೂಲಿ ಕೆಲಸ

ವಾಸಸ್ಥಳ : ತೆಲಕೂರು

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ಚಾ ಸಾ 1, 3, 4, 6 ಮತ್ತು 7 ಗೊತ್ತು. ನ್ಯಾಯಾಲಯದಲ್ಲಿ ಹಾಜರಿರುವ ಆರೋಪಿತರು ಪರಿಚಯ. ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ಗುನ್ಹೆ ಸ್ಥಳದ ಪಂಚನಾಮೆಯಾಗಿದ್ದು ಸಾಕ್ಷಿಯು ಅದನ್ನು ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-2 ಎಂದು ಗುರುತಿಸಲಾಯಿತು. ನಾನು ಸದರಿ ದಾಖಲಾತಿಗೆ ಸುಮಾರು 8 ರಿಂದ 9 ವರ್ಷಗಳ ಹಿಂದೆ ಹೆಬೆಟ್ಟಿನ ಗುರುತು ಹಾಕಿರುತ್ತೇನೆ. ಆಗ ಪೋಲೀಸರು ಬಂದು ಪಂಚನಾಮೆ ಮಾಡಿ ಒಂದು ಬಡಿಗೆ ಮತ್ತು ಒಂದು ಕಲ್ಲನ್ನು ವಶಪಡಿಸಿಕೊಂಡಿರುತ್ತಾರೆ. ಸಾಕ್ಷಿಯು ಮು ಮಾ 1 ಮತ್ತು 2 ನ್ನು ನೋಡಿ ಗುರುತಿಸಿರುತ್ತಾರೆ. ಸದರಿ ಪಂಚನಾಮೆಯನ್ನು ಸಂಜೆ 04-00 ರಿಂದ 05-00 ಗಂಟೆಯ ವರೆಗೆ ಜರುಗಿಸಲಾಯಿತು.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದ:

ಆರೋಪಿ ಪರ ವಕೀಲರು ಪಾಟೀಸವಾಲಿಗೆ ಕಾಲಾವಕಾಶ ಕೋರಿದ್ದು ಆದರೆ ಯಾವುದೇ ಸಮಂಜಸ ಕಾರಣನೀಡದೆ ಇರುವುದರಿಂದ ಆರೋಪಿ ಪರ ವಕೀಲರ ವಿನಂತಿಯನ್ನು ತಳ್ಳಿ ಹಾಕಿ ಪಾಟಿ ಸವಾಲು ಇಲ್ಲ ಎಂದು ತೆಗೆದುಕೊಳ್ಳಲಾಯಿತು.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**